**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು - 560001.**

ಸಂಖ್ಯೆ:ಸಿ7(2)ಪ್ರಾಶಿಅ/ಖಾ.ಶಾ.ದಾ&ಶುಲ್ಕ-03/2021-22 ದಿನಾಂಕ:13-12-2021

**: : ಸುತ್ತೋಲೆ : :**

ವಿಷಯ: 2021-22ನೇ ಸಾಲಿನ ಶೈಕ್ಷಣಿಕ ವರ್ಷದ ಶುಲ್ಕವನ್ನು ಹೆಚ್ಚುವರಿ ಮಾಡಲು ಅನುಮತಿ ಕೋರಿರುವ ಬಗ್ಗೆ.

ಉಲ್ಲೇಖ: 1. ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ ಇವರ ಕಛೇರಿ ಪತ್ರದ ಸಂಖ್ಯೆ: MAG(4)/DERA/RTE/CR.09/2021-22, ದಿನಾಂಕ:01-10-2021, 08-11-2021.

2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 31 ಪಿಜಿಸಿ 2019, ದಿನಾಂಕ:24-07-2019.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ 2021-22ನೇ ಶೈಕ್ಷಣಿಕ ಸಾಲಿನ ಶುಲ್ಕವನ್ನು ಹೆಚ್ಚುವರಿ ಮಾಡಲು ಅನುಮತಿ ಕೋರಿರುವ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ ಕಾನೂನು ರೀತ್ಯಾ ತಮ್ಮ ಹಂತದಲ್ಲಿ ಅಗತ್ಯ ಕ್ರಮವಹಿಸಲು ಉಲ್ಲೇಖ(1)ರ ಪತ್ರದಲ್ಲಿ ಕೋರಿರುತ್ತಾರೆ.

ಸದರಿ ಪತ್ರಗಳನ್ನು ಪರಿಶೀಲಿಸಿದೆ. ಈಗಾಗಲೇ ಉಲ್ಲೇಖ(2)ರ ಸರ್ಕಾರದ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಖಾಸಗಿ ಅನುದಾನರಹಿತ ಶಾಲೆಗಳು ತಮ್ಮ ಶಾಲೆಯಲ್ಲಿ ಆಯಾ ಶೈಕ್ಷಣಿಕ ವರ್ಷದಲ್ಲಿ ಪಡೆಯುವ ಶುಲ್ಕದ ಸ್ವರೂಪಗಳನ್ನು ಶಾಲಾ ಸೂಚನಾ ಫಲಕ ಮತ್ತು ಇಲಾಖಾ [ಎಸ್.ಎ.ಟಿ.ಎಸ್] ವೆಬ್ ಸೈಟ್ ನಲ್ಲಿ ಪ್ರಕಟಿಸುವುದು ಮತ್ತು ಪ್ರಕಟಿತ ಶುಲ್ಕವನ್ನು ದಾಖಲಾದ ಮಕ್ಕಳ ಪೋಷಕರಿಂದ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಎಲ್ಲಾ ಶಾಲಾ ಆಡಳಿತ ಮಂಡಳಿಗಳು 2021-22ನೇ ಶೈಕ್ಷಣಿಕ ಸಾಲಿನಲ್ಲಿ ಪಡೆಯುವ ಶುಲ್ಕದ ಸ್ವರೂಪಗಳನ್ನು ಇಲಾಖಾ [ಎಸ್.ಎ.ಟಿ.ಎಸ್] ವೆಬ್ ಸೈಟ್ ನಲ್ಲಿ ಪ್ರಕಟಿಸಲು ಹಾಗೂ ಶಾಲೆಯ ಸೂಚನಾ ಫಲಕದಲ್ಲಿ ಪೋಷಕರಿಗೆ ಮತ್ತು ಸಾರ್ವಜನಿಕವಾಗಿ ಕಾಣುವಂತೆ ಪ್ರಕಟಿಸಲು ಕ್ರಮವಹಿಸುವುದು. ಈ ಬಗ್ಗೆ ಆಯಾ ಜಿಲ್ಲೆಯ ಉಪನಿರ್ದೇಶಕರು(ಆಡಳಿತ)/ ಆಯಾ ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳು ಇವರು ಎಲ್ಲಾ ಶಾಲೆಗಳು ಶುಲ್ಕದ ವಿವರಗಳನ್ನು ಪ್ರಕಟಿಸುವ ಬಗ್ಗೆ ಅಗತ್ಯ ಕ್ರಮವಹಿಸಲು ಸೂಚಿಸಿದೆ.

ಮುಂದುವರೆದು, ಕೋವಿಡ್-19ರ ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ / ಇಲಾಖೆ ಹೊರಡಿಸುವ ಮಾರ್ಗಸೂಚಿಗಳಂತೆ ಆಗಬಹುದಾದ ಬದಲಾವಣೆಗಳಿಗೆ ಈ ಆದೇಶ ಒಳಪಟ್ಟಿರುತ್ತದೆ.

ನಿರ್ದೇಶಕರು [ಪ್ರಾಥಮಿಕ ಶಿಕ್ಷಣ]

ಗೆ,

ರಾಜ್ಯದ ಎಲ್ಲಾ ಖಾಸಗಿ ಶಾಲಾ ಆಡಳಿತ ಮಂಡಳಿಗಳಿಗೆ[ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ]

ಪ್ರತಿಯನ್ನು:

1. ಜಂಟಿ ನಿರ್ದೇಶಕರು(ಆಡಳಿತ), ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ಶುಲ್ಕಗಳನ್ನು ಪ್ರಟಿಸಲು ಆಡಳಿತ ಮಂಡಳಿಗೆ ಅವಕಾಶ ನೀಡುವ ಬಗ್ಗೆ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಅಗತ್ಯ ಕ್ರಮಕ್ಕಾಗಿ.
4. ಅಧ್ಯಕ್ಷರು, ಜಿಲ್ಲಾ ಶಿಕ್ಷಣ ನಿಯಂತ್ರಣಾ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ, ಕೆ.ಜಿ.ರಸ್ತೆ, ಬೆಂಗಳೂರು-560009.
5. ಕಾರ್ಯಕ್ರಮಾಧಿಕಾರಿಗಳು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ಶುಲ್ಕಗಳನ್ನು ಪ್ರಟಿಸಲು ಆಡಳಿತ ಮಂಡಳಿಗೆ ಅವಕಾಶ ನೀಡುವ ಬಗ್ಗೆ ಕ್ರಮಕ್ಕಾಗಿ.
6. ಕಛೇರಿ ಪ್ರತಿ.